# ಪ್ರಾಕೃತಿಕ ಅಡ್ಡಿಯನ್ನು ವೈಜ್ಞಾನಿಕವಾಗಿ ಹಾಗೂ ತಾಂತ್ರಿಕವಾಗಿ ಹಿಮ್ಮೆಟ್ಟಿಸಬೇಕಾಗಿದೆ: ಎ.ಎಸ್. ಕಿರಣ್ ಕುಮಾರ್

ಕಾರ್ಯಗತವಲ್ಲದ, ಯೋಜನಾರಹಿತ ಬೆಳವಣಿಗೆಯಿಂದಾಗಿರುವ ಪ್ರಾಕೃತಿಕ ಅಡ್ಡಿಯನ್ನು ವೈಜ್ಞಾನಿಕವಾಗಿ ಹಾಗೂ ತಾಂತ್ರಿಕವಾಗಿ ಹಿಮ್ಮೆಟ್ಟಿಸಬೇಕಾಗಿದೆ ಎಂದು ಇಸ್ರೋ ಅಧ್ಯಕ್ಷರಾದ ಪದ್ಮಶ್ರೀ ಎ.ಎಸ್ ಕಿರಣ್ ಕುಮಾರ್ ರವರು ಹೇಳೀದರು,

ಅವರು ಮೈಸೂರುರಸ್ತೆಯಲ್ಲಿರುವ ರಾಷ್ಟ್ರೀಯ ವಿದ್ಯಾಲಯ ತಾಂತ್ರಿಕ ಕಾಲೇಜಿನ ಆವರಣದಲ್ಲಿ ಆಯೋಜಿಸಲಾಗಿದ್ದ 6ನೇ ಘಟಿಕೋತ್ಸವವನ್ನು ಉದ್ಘಾಟಿಸಿ ಮಾತನಾಡಿ ಪ್ರತಿಯೊಬ್ಬರ ಜೀವನದಲ್ಲೂ ಸರ್ವತೋಮುಖ ಬೆಳವಣಿಗೆಯಲ್ಲಿ ಬೌದ್ಧಿಕ ಅರಿವು ಮಹತ್ವದ ಪಾತ್ರ ನಿರ್ವಹಿಸುತ್ತದೆ. ಸಾಹಿತ್ಯ, ತರ್ಕಶಾಸ್ತ್ರ ಹಾಗೂ ಇತಿಹಾಸಗಳು ಅರಿವು ಹೆಚ್ಚಿಸುವುದರಲ್ಲಿ ಮಹತ್ವದ ಕೊಡುಗೆ ನೀಡುತ್ತವೆ ಎಂದು ಅವರು ಅಭಿಪ್ರಾಯಪಟ್ಟರು.

ನಿಸರ್ಗವು ವಿಜ್ಞಾನ ಹಾಗೂ ತಂತ್ರಜ್ಞಾನದಲ್ಲಿನ ಆವಿಷ್ಕಾರಗಳಿಗೆ ಪ್ರೇರಣೆಯಾಗಿದ್ದು ಆರೋಗ್ಯ, ರಕ್ಷಣಾ ವ್ಯವಸ್ಥೆ, ಶಿಕ್ಷಣ, ಮನರಂಜನೆ, ಸಂವಹನ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿನ ಮಹತ್ವದ ಬದಲಾವಣೆಗೆ ಕಾರಣವಾಗಿವೆ. ಜಾಗತಿಕ ತಾಪಮಾನ ಏರಿಕೆ, ಹಿಮ ಪ್ರವಾಹ, ಸಮುದ್ರ ಮಟ್ಟದ ಏರಿಕೆ, ವಾಯು ಮಾಲಿನ್ಯ, ಸಾಗರದ ಆಮ್ಲೀಕರಣ, ವನ್ಯ ಜೀವಿಗಳ ಪ್ರಬೇಧ, ಅಂತರ್ಜಲ ಮಲಿನತೆ ಮುಂತಾದವುಗಳಿಂದ ಉಂಟಾಗುವ ದುಷ್ಪರಿಣಾಮಗಳ ಮುಂದಾಲೋಚನೆ ಇಲ್ಲದೆ ತಂತ್ರಜ್ಞಾನ ಆವಿಷ್ಕಾರದಿಂದ ಉಂಟಾಗಿದೆ ಎಂದು ಅಭಿಪ್ರಾಯಪಟ್ಟರು. ನೀರು, ಶಕ್ತಿ ಹಾಗೂ ತ್ಯಾಜ್ಯ ನಿರ್ವಹಣೆಗೆ ಸಂಬಂದಿಸಿದ ಕಾಲೇಜಿನ ಕಾರ್ಯಗಳನ್ನು ಹಾಗೂ ಅದನ್ನು ಸ್ವತಂತ್ರವಾಗಿ ನಿರ್ವಹಿಸುತ್ತಿರುವ ರೀತಿಯನ್ನು ಅವರು ಶ್ಲಾಘಿಸಿದರು.




ಆರ್.ವಿ.ಶಿಕ್ಷಣ ಸಂಸ್ಥೆಗಳ ಅಧ್ಯಕ್ಷ ಡಾ.ಎಂ.ಕೆ.ಪಾಂಡುರಂಗಶೆಟ್ಟಿ ಅಧ್ಯಕ್ಷತೆ ವಹಿಸಿ ಮಾತನಾಡಿ ನಮ್ಮ ಸಂಸ್ಥೆಗಳ ವಿದ್ಯಾರ್ಥಿಗಳು ಸಾಮಾಜಿಕ ಕಳಕಳಿಯನ್ನು ತಮ್ಮ ವಿದ್ಯಾರ್ಜನೆಯ ಸಮಯದಲ್ಲೇ ಅಳವಡಿಸಿಕೊಂಡು ದೇಶಕ್ಕೆ ಪೂರಕವಾದಂತಹ ಸೇವೆಯನ್ನು ಸಲ್ಲಿಸುವ ಮೂಲಕ ಸಂಸ್ಥೆಯ ಘನತೆ ಗೌರವನ್ನು ಹೆಚ್ಚಿಸಬೇಕೆಂದು ವಿದ್ಯಾರ್ಥಿಗಳಿಗೆ ಕಿವಿ ಮಾತು ಹೇಳಿದರು.

ಇದೇ ಸಂದರ್ಭದಲ್ಲಿ ಸ್ವಾಯುತ್ತತೆಯಡಿಯಲ್ಲಿ ಆರನೆಯ ತಾಂತ್ರಿಕ ಮತ್ತು ಐದನೆಯ ವಾಸ್ತುಶಿಲ್ಪ ಪದವಿ ಪಡೆದ ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ರಾ.ವಿ ತಾಂತ್ರಿಕ ಮಹಾವಿದ್ಯಾಲಯ ಆಡಳಿತ ಮಂಡಳಿಯ ಅಧ್ಯಕ್ಷರಾದ ಡಾ॥ ಎಂ.ಕೆ ಪಾಂಡುರಂಗ ಶೆಟ್ಟಿಯವರು ವಹಿಸಿದ್ದರು. ಸಂಸ್ಥೆಯ ಟ್ರಸ್ಟಿಗಳು, ಪ್ರಾಂಶುಪಾಲ ಡಾ.ಕೆ. ಎನ್.ಸತ್ಯನಾರಾಯಣ, ಅಧ್ಯಾಪಕರು, ಸಿಬ್ಬಂದಿವರ್ಗ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದು ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.